ಎಂ.ವಿ.ಸಿ. 234/2023, ಪಿ.ಡಬ್ಲೂ.1 ಹೆಸರುಃ ನೇತ್ರಮ್ಮ

**ದಿಃ11-08-2026 ರಂದು ಸಾಕ್ಷಿದಾರರು ಹಾಜರಿದ್ದು, ಪ್ರಮಾಣ ವಚನ ಬೋಧಿಸಲಾಯಿತು**

**ಪಾಟೀ ಸವಾಲು : 2 ನೇ ಎದುರುದಾರರ ಪರ ಶ್ರೀ ಕೆ.ಎಂ.ಬಿ. ವಕೀಲರಿಂದಃ**

ನಾನು ಅಪಘಾತವನ್ನು ಪ್ರತ್ಯಕ್ಷವಾಗಿ ನೋಡಿಲ್ಲ. ನನ್ನ ಮಗ ಮೃತಪಟ್ಟಾಗ ಆತನಿಗೆ 23 ವರ್ಷ ವಯಸ್ಸಾಗಿತ್ತು. ನನ್ನ ಮಗ ಹಿಂಬದಿ ಸವಾರನಾಗಿ ಬೈಕಿನಲ್ಲಿ ಹೋಗುತ್ತಿದ್ದನು. ನನ್ನ ಮಗ ಹೋಗುತ್ತಿದ್ದ ಬೈಕಿಗೆ ಡಿಕ್ಕಿಪಡಿಸಿದ ಅಂಬುಲೆನ್ಸ್‌ನ ಚಾಲಕನಿಗೆ ಚಾಲನಾ ಪರವಾನಗಿ ಇರಲಿಲ್ಲ ಎಂದರೆ ಗೊತ್ತಿಲ್ಲ. ನನ್ನ ಮಗ ಹೋಗುತ್ತಿದ್ದ ಬೈಕಿನಲ್ಲಿ ಮೂರು ಜನ ಹೋಗುತ್ತಿದ್ದರು ಎಂದರೆ ಸರಿ. ನನ್ನ ಮಗ ಹೋಗುತ್ತಿದ್ದ ಬೈಕಿಗೆ ಡಿಕ್ಕಿಪಡಿಸಿರುವ ಅಂಬುಲೆನ್ಸ್‌ನ ಚಾಲಕನಿಗೆ ಚಾಲನಾ ಪರವಾನಗಿ ಇಲ್ಲದ ಕಾರಣ 2 ನೇ ಎದುರುದಾರರು ಯಾವುದೇ ಪರಿಹಾರವನ್ನು ಪಾವತಿಸಲು ಬಾದ್ಯಸ್ಥರಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿನ ಎಲ್ಲಾ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರುವಿಚಾರಣೆ : ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ